**ಮೂರನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಕನಕಪುರ**

**<u>ಸಿ.ಸಿ ನಂ. 605/2016</u>**

ದಿನಾಂಕಃ**.24.06.2026** ರಂದು ಸಾಕ್ಷಿಗೆ ಬೆಳಗ್ಗೆ **11.55** ಗಂಟೆಗೆ ಪ್ರಮಾಣ ವಚನ ಭೋದಿಸಲಾಯಿತು.

| ಚಾಸಾ-**3** | ಪ್ರಾಸಾ-**1** |
|---|---|
| ಹೆಸರು | - ನಂಜುಂಡಸ್ವಾಮಿ |
| ತಂದೆ ಹೆಸರು | - ದುಂಡುಮಾದಯ್ಯ |
| ವಯಸ್ಸು | - **42** |
| ಉದ್ಯೋಗ | - ವ್ಯವಸಾಯ |
| ವಿಳಾಸ | - ದೊಡ್ಡಾಲಹಳ್ಳಿಗ್ರಾಮ |

**<u>ಮುಖ್ಯವಿಚಾರಣೆ : ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರಿಂದಃ-</u>**

ಆರೋಪಿ ನನಗೆ ಪರಿಚಯ ಇಲ್ಲ. ಚಾ.ಸಾ. **1, 2, 4** ಪರಿಚಯ ಇಲ್ಲ. ನನಗೆ ಈ ಪ್ರಕರಣದ ಬಗ್ಗೆ ಗೊತ್ತಿಲ್ಲ.

ಸಾಕ್ಷಿ ಒಂದು ಪಂಚನಾಮೆಯನ್ನು ನೋಡಿ ಅದರಲ್ಲಿ ನನ್ನ ಸಹಿ ಇರುವುದಿಲ್ಲ. ನಾನು ಯಾವುದೇ ಪಂಚನಾಮೆಯಲ್ಲಿ ಭಾಗವಹಿಸಿಲ್ಲ.

ಪೊಲೀಸರು ನನ್ನ ಸಮಕ್ಷಮ ಪಂಚನಾಮೆ ಮಾಡಿರುವುದಿಲ್ಲ.

ನಾನು ಪೊಲೀಸರಿಗೆ ಯಾವುದೇ ಹೇಳಿಕೆ ಕೊಟ್ಟಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಸರ್ಕಾರಿ ಅಭಿಯೋಜಕರು ರವರು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)

**<u>ಪಾಟೀ ಸವಾಲುಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-</u>**

ದಿ. **16.08.2015** ರಂದು ಮದ್ಯಾಹ್ನ **2** ಗಂಟೆ ಸಮಯದಲ್ಲಿ ಮಹಿಮಾನಹಳ್ಳಿ ಗ್ರಾಮದ ಸರ್ವೆ ನಂಬರ್ **41/3** ಚಾ.ಸಾ. **1** ರವರ ಜಮೀನಿನಲ್ಲಿ ಆರೋಪಿಯು ಅಕ್ರಮ ಪ್ರವೇಶ ಮಾಡಿ ಜಮೀನಿಗೆ ಹಾಕಿದ್ದ ಕಲ್ಲು ಕುಚ್ಚುಗಳನ್ನು

ಕಿತ್ತು ಹಾಕಿ ಮುಳ್ಳು ತಂತಿಯನ್ನು ನಾಶಮಾಡಿ ಸುಮಾರು **20** ಸಾವಿರ ನಷ್ಟು ನಷ್ಟವುಂಟು ಮಾಡಿದಾಗ, ಕೇಳಲು ಹೋದ ಚಾ.ಸಾ. **1** ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಕೊಲೆ ಬೆದರಿಕೆ ಹಾಕಿದ ಎಂದರೆ ಸರಿಯಲ್ಲ.

ದಿ.**17.08.2015** ರಂದು ನನ್ನ ಹಾಗೂ ಚಾಸಾ-**1** ಮತ್ತು **4** ರವರ ಸಮಕ್ಷಮ ಪೊಲೀಸರು ಪಂಚನಾಮೆಯನ್ನು ಮದ್ಯಾಹ್ನ **1** ಗಂಟೆಯಿಂದ **1.30** ಗಂಟೆವರೆಗೆ ಪಂಚನಾಮೆ ಮಾಡಿದರು ಎಂದರೆ ಸರಿಯಲ್ಲ.

ಸಾಕ್ಷಿಗೆ ದಿಃ **17.08.2015** ರಂದು ಅವನು ಪೊಲೀಸರಿಗೆ ನೀಡಿದ ಎಂಬ ಹೇಳಿಕೆಯ ಭಾಗವಾದ "ದಿ.**16.08.2015**......ಗುರುತಿಸುತ್ತೇನೆ ", ಓದಿ ಹೇಳಿದಾಗ ಅಲ್ಲಗಳೆದಿದ್ದರಿಂದ ಸದರಿ ಹೇಳಿಕೆ ಭಾಗವನ್ನು **ನಿಪಿ-1** ಎಂದು ಗುರುತಿಸಲಾಯಿತು.

ಆರೋಪಿಯೊಂದಿಗೆ ರಾಜಿ ಮಾಡಿಕೊಂಡಿರುವ ಕಾರಣ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲು: ಆರೋಪಿ ಪರ ಶ್ರೀ. ಎಸ್.ವಿ.ವಿ. ವಕೀಲರಿಂದಃ</u>**

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

ಮರುವಿಚಾರಣೆ ಇಲ್ಲ.

(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಮದ್ಯಾಹ್ನ **12** ಗಂಟೆಯವರೆಗೆ ಪಡೆದುಕೊಂಡಿರುತ್ತೇನೆ ಎಂದು ಧೃಢೀಕರಿಸುತ್ತೇನೆ)

ಓದಿ ಹೇಳಿ ಕೇಳಿ ಸರಿ ಇದೆ,

**ಮೂರನೇ ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ., ಕನಕಪುರ.**